ಸಂ:ಡಿ.ವೈ.ಇ.ಎಸ್/ಕ್ರೀಚಕಪ್ರೋ/69/2025-26

ಆಯುಕ್ತರ ಕಾರ್ಯಾಲಯ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು-01, ದಿನಾಂಕ: 17-07-2026

**ಸುತ್ತೋಲೆ**

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯಕ್ರಮಗಳಡಿ 2025 ನೇ ಸಾಲಿನ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸುವ ಕುರಿತು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2026-27 ನೇ ಸಾಲಿನ ಕ್ರೀಡಾ ಕಲ್ಯಾಣ ಯೋಜನೆ ಅಡಿಯಲ್ಲಿ ಅಂತರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅದೀಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡಲು 2025 ನೇ, ಸಾಲಿನ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ ಯೊಜನೆ ಅಡಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.

ಅಸಕ್ತ ಕ್ರೀಡಾಪಟುಗಳು ಅರ್ಜಿಗಳನ್ನು ಅಧಿಕೃತ ಜಾಲತಾಣ: **https://sevasindu.karnataka.gov.in** ಮೂಲಕ ಕಡ್ಡಾಯವಾಗಿ ಆನ್‌ಲೈನ್ ಮೂಲಕ ನಿಗದಿತ ದಿನಾಂಕದೊಳಗೆ ಸಲ್ಲಿಸಲು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಅಂತಿಮ **ದಿನಾಂಕ:31.07.2026 ರಂದು ಕೊನೆಯ ದಿನಾಂಕವಾಗಿರುತ್ತದೆ,** ಈ ಬಗ್ಗೆ ತಮ್ಮ ಜಿಲ್ಲೆಯಲ್ಲಿ ಹೆಚ್ಚು ಪ್ರಚಾರದಲ್ಲಿರುವ ಸ್ಥಳೀಯ ದಿನ ಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಪತ್ರಿಕಾ ವರದಿ ಪ್ರತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ತಿಳಿಸಿದೆ.

**(ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯುವ ಸಹಾಯವಾಣಿ 155265 ಗೆ ಕಛೇರಿ ಅವಧಿಯಲ್ಲಿ ಸಂಪರ್ಕಿಸಲು ಸೂಚಿಸಿದೆ.**

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ,

1. ಮಾನ್ಯ ಉಪಾಧ್ಯಕ್ಷರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಕಂಠೀರವ ಕ್ರೀಡಾಂಗಣ.
2. ಮಹಾನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು
3. ಅಧ್ಯಕ್ಷರು, ಕರ್ನಾಟಕ ಒಲಂಪಿಕ್ ಸಂಸ್ಥೆ, ಬೆಂಗಳೂರು.
4. ಎಲ್ಲಾ ಜಿಲ್ಲೆಗಳ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
5. ರಾಜ್ಯದ ಎಲ್ಲಾ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು.
6. ಹೆಚ್ಚುವರಿ ಪ್ರತಿ.

# ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಯ ಮಾರ್ಗಸೂಚಿಗಳು

ಕರ್ನಾಟಕ ರಾಜ್ಯದ ಗ್ರಾಮೀಣ ಕ್ರೀಡೆಗಳಿಗೆ ಮತ್ತು ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ 'ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ'ಯನ್ನು ನೀಡಿ ಗೌರವಿಸಲಾಗುವುದು.

ರಾಜ್ಯದಲ್ಲಿ ಗ್ರಾಮೀಣ ಕ್ರೀಡೆಯ ಅಭಿವೃದ್ಧಿಗಾಗಿ ಸ್ಥಳೀಯ ಮತ್ತು ಪಾರಂಪರಿಕ ಕ್ರೀಡೆಗಳಲ್ಲಿ ಸಾಧಿಸಿದ ಅತ್ಯುತ್ತಮ ಸಾಧನೆಗಳನ್ನು ಗುರುತಿಸಿ ಪ್ರಶಸ್ತಿ ನೀಡಿ ಪ್ರೋತ್ಸಾಹಿಸಲಾಗುವುದು.

- ಅರ್ಜಿಗಳನ್ನು ನಿಗದಿತ ನಮೂನೆಯಲ್ಲಿ ನಿಗದಿತ ದಿನಾಂಕದೊಳಗೆ ಸೇವಾಸಿಂಧು ಪೋರ್ಟಲ್ ಮೂಲಕ ಸಲ್ಲಿಸತಕ್ಕದ್ದು.
- ಅರ್ಜಿ ನಮೂನೆಯ ಎಲ್ಲಾ ಕಾಲಂಗಳನ್ನು ಕಡ್ಡಾಯವಾಗಿ ತುಂಬತಕ್ಕದ್ದು.
- ಖೋ-ಖೋ, ಥ್ರೋಬಾಲ್, ಆಟ್ಯಾಪಾಟ್ಯಾ, ಮಲ್ಲಕಂಬ, ಯೋಗ, ಕುಸ್ತಿ ಮತ್ತು ಕಬಡ್ಡಿ ಕ್ರೀಡೆಗಳಿಗೆ ರಾಜ್ಯ ಮತ್ತು ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಪ್ರಶಸ್ತಿ ನೀಡುವ ವರ್ಷ ಸೇರಿದಂತೆ 5 ವರ್ಷಗಳ ಕ್ರೀಡಾ ಸಾಧನೆಯ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ಮಲ್ಲಕಂಬ, ಗುಂಡು ಎತ್ತುವುದು, ದೊಣ್ಣೆವರಸೆ, ಕಂಬಳ, ಸಂಗ್ರಾಣಿ ಕಲ್ಲು ಎತ್ತುವುದು ಮತ್ತು ಎತ್ತಿನಗಾಡಿ ಸ್ಪರ್ಧೆ ಮುಂತಾದ ಸ್ಥಳೀಯ ಗ್ರಾಮೀಣ ಕ್ರೀಡೆಗಳಲ್ಲಿ ಭಾಗವಹಿಸಿದ ಬಗ್ಗೆ ಪ್ರಮಾಣ ಪತ್ರ, ಪ್ರಶಸ್ತಿ ಪತ್ರ, ಛಾಯಾಚಿತ್ರ, ಪೇಪರ್ ಕಟಿಂಗ್, ಕ್ರೀಡೆ ನಡೆದ ದಿನಾಂಕ, ಸ್ಥಳ ಮತ್ತು ಸಾಧನೆಗಳನ್ನು ಸ್ಥಳೀಯ ಕ್ರೀಡಾಕೂಟ ಸಂಘಟಕರಿಂದ ದೃಢೀಕರಿಸಿ ಸಲ್ಲಿಸತಕ್ಕದ್ದು.
- ಅರ್ಜಿಯೊಂದಿಗೆ ಸಲ್ಲಿಸುವ ಕ್ರೀಡಾ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಸ್ವಯಂ ದೃಢೀಕರಿಸಿ ಸಲ್ಲಿಸತಕ್ಕದ್ದು.
- ಈ ಸ್ವಯಂ ಮೌಲ್ಯಮಾಪನ ಪತ್ರದಲ್ಲಿ ಕ್ರೀಡಾಪಟು ಪ್ರಶಸ್ತಿಗಾಗಿ ದಾಖಲಿಸಿರುವ ಕಳೆದ 5 ವರ್ಷಗಳಲ್ಲಿ ಪ್ರಮುಖ 3 ಸಾಧನೆಗಳ ವಿವರಗಳನ್ನು ತುಂಬಿ ನಿಗದಿತ ಅಂಕಗಳನ್ನು ಗುರುತಿಸುವುದು.
- ಖೋ-ಖೋ, ಥ್ರೋಬಾಲ್, ಆಟ್ಯಾಪಾಟ್ಯಾ, ಮಲ್ಲಂಕಂಬ, ಯೋಗ, ಕುಸ್ತಿ ಮತ್ತು ಕಬಡ್ಡಿ ಕ್ರೀಡೆಗಳಿಗೆ ರಾಜ್ಯ, ರಾಷ್ಟ್ರ ಮಟ್ಟದ , ಅಂತರಾಷ್ಟ್ರಮಟ್ಟದ ಕ್ರಿಡೆಗಳಲ್ಲಿ ಪ್ರಶಸ್ತಿ ನೀಡುವ ವರ್ಷ ಸೇರಿದಂತೆ 5 ವರ್ಷಗಳ ಕ್ರೀಡಾ ಸಾಧನೆಯನ್ನು ಪರಿಗಣಿಸಲಾಗುವುದು.
- ಅಂಗೀಕೃತ ಕ್ರೀಡಾ ಫೆಡರೇಷನ್‌ಗಳಿಲ್ಲದ ಗ್ರಾಮಿಣ ಕ್ರೀಡೆಗಳಲ್ಲಿ ಭಾಗವಹಿಸಿ ಸಾಧನೆ ಮಾಡಿದ ಕ್ರೀಡಾಪಟುಗಳ 5 ವರ್ಷದ ಸಾಧನೆಯನ್ನು ಪರಿಗಣಿಸಲಾಗುವುದು.
- ಭಿನ್ನಸಾಮರ್ಥ್ಯದ ಕ್ರೀಡಾಪಟುಗಳು ಕಳೆದ 5 ವರ್ಷಗಳಲ್ಲಿ ರಾಜ್ಯವನ್ನು ಪ್ರತಿನಿಧಿಸಿ ರಾಷ್ಟ್ರೀಯ ಮತ್ತು ಅಂತರರಾಷ್ಟ್ರ ಮಟ್ಟದ ಕ್ರೀಡೆಗಳಲ್ಲಿ ಪ್ರಶಸ್ತಿ ನೀಡುವ ವರ್ಷ ಸೇರಿದಂತೆ 5 ವರ್ಷಗಳ ಕ್ರೀಡಾ ಸಾಧನೆಯನ್ನು ಪರಿಗಣಿಸಲಾಗುವುದು.
- ಈ ಹಿಂದೆ ಏಕಲವ್ಯ ಪ್ರಶಸ್ತಿಗಳನ್ನು ಪಡೆದವರು ಈ ಪ್ರಶಸ್ತಿಯನ್ನು ಪಡೆಯಲು ಅರ್ಹರಿರುವುದಿಲ್ಲ.
- ಕರ್ನಾಟಕ ನಿವಾಸಿಗಳಲ್ಲದ ಹಾಗೂ ರಾಜ್ಯವನ್ನು ಪ್ರತಿನಿಧಿಸದೇ ಇರುವ ಕ್ರೀಡಾಪಟುಗಳು ಈ ಪ್ರಶಸ್ತಿಗೆ ಅರ್ಹರಾಗಿರುವುದಿಲ್ಲ.
- ಕ್ರಿಮಿನಲ್ ಹಿನ್ನೆಲೆ ಇಲ್ಲ ಎಂಬ ಬಗ್ಗೆ ಸ್ಥಳೀಯ 'ಪೋಲೀಸ್ ಪ್ರಮಾಣ ಪತ್ರವನ್ನು' ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಯು ಪ್ರಮಾಣ ಪತ್ರ, ಶಾಲು, (ಪುರುಷರಿಗೆ ಪ್ಯಾಂಟು, ಶರ್ಟು,ಟೈ, ಬ್ಲೇಚರ್, ಶೂ ಮತ್ತು ಮಹಿಳೆಯರಿಗೆ ಮೈಸೂರು ಸಿಲ್ಕ ಸೀರೆ, ಬ್ಲೇಜರ್,ಚಪ್ಪಲ್, ಸ್ಕೋಲ್, ನಗದು ಬಹುಮಾನ ರೂ 2.00 ಲಕ್ಷಗಳನ್ನು ಒಳಗೊಂಡಿರುತ್ತದೆ.
- ಕ್ರೀಡಾಪಟು ಅರ್ಜಿಸಲ್ಲಿಸಿದ ನಂತರ ಮರಣ ಹೊಂದಿದಲ್ಲಿ ಆ ಕ್ರೀಡಾಪಟು ಪ್ರಶಸ್ತಿಗೆ ಅರ್ಹರಾಗಿದ್ದಲ್ಲಿ ಮರಣೋತ್ತರ ಪ್ರಶಸ್ತಿಗೆ ಪರಿಗಣಿಸಲಾಗುವುದು.

- ನೀಡಲಾದ ದಾಖಲೆಗಳಲ್ಲಿ ತಪ್ಪು ಮಾಹಿತಿ ನೀಡಿರುವುದು ಗಮನಕ್ಕೆ ಬಂದಲ್ಲಿ ಅಂತಹ ಅರ್ಜಿಗಳನ್ನು ಅನರ್ಹಗೊಳಿಸಲಾಗುವುದು ಹಾಗೂ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು
- **ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಯನ್ನು ಈ ಕೆಳಕಂಡ ಕಾರಣಗಳಿಗಾಗಿ ರದ್ದುಗೊಳಿಸಬಹುದಾಗಿರುತ್ತದೆ.**
- ಅ) ಸುಳ್ಳು(ನಕಲಿ ) ಪ್ರಮಾಣ ಪತ್ರ ಸಲ್ಲಿಸಿರುವುದು ದೃಢಪಟ್ಟಲ್ಲಿ
- ಆ) ಪ್ರಶಸ್ತಿಯನ್ನು ನೀಡಬೇಕಾದ ಮಾಹಿತಿಯು ತಪ್ಪಾಗಿದ್ದು ಪ್ರಶಸ್ತಿಯನ್ನು ನೀಡಿದ್ದಲ್ಲಿ ಪ್ರಶಸ್ತಿ ನೀಡಿರುವುದು ತಪ್ಪೆಂದು ಕಂಡು ಬಂದಲ್ಲಿ ಪ್ರಶಸ್ತಿಯನ್ನು ಹಿಂದಕ್ಕೆ ಪಡೆಯಲಾಗುವುದು ಹಾಗೂ ಅಂತಹ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು.
- 11. ಪ್ರಶಸ್ತಿಗಾಗಿ ಶಿಫಾರಸ್ಸು ಮಾಡಿರುವ ಕ್ರೀಡಾಪಟುಗಳು ಈ ಪ್ರಶಸ್ತಿಯ ನೀತಿ ನಿಯಮಗಳನ್ನು ಒಪ್ಪಿಕೊಳ್ಳತಕ್ಕದ್ದು.
- 12.ಖೋ-ಖೋ ಥ್ರೋಬಾಲ್, ಕಬಡ್ಡಿ, ಆಟ್ಯಾ ಪಾಟ್ಯಾ, ಮಲ್ಲಕಂಬ, ಮಟ್ಟಿ ಕುಸ್ತಿ/ಜಂಗಿ ಕುಸ್ತಿ ಕ್ರೀಡೆಗಳಿಗೆ ರಾಷ್ಟ್ರ ಮತ್ತು ಅಂತರರಾಷ್ಟ್ರ ಮಟ್ಟದ ಸಾಧನೆಗಳನ್ನು ಪರಿಗಣಿಸಲಾಗುವುದು.
- 13.ಮಲ್ಲಕಂಬ, ಗುಂಡು ಎತ್ತುವುದು, ದೊಣ್ಣೆ ವರಸೆಮ, ಕಂಬಳ, ಸಂಗ್ರಾಣಿ ಕಲ್ಲು ಎತ್ತುವುದು ಮತ್ತು ಎತ್ತಿನ ಗಾಡಿ ಸ್ಪರ್ಧೆ ಮುಂತಾದ ಸ್ಥಳೀಯ ಜನಪ್ರಿಯ ಗ್ರಾಮೀಣ ಕ್ರೀಡೆಗಳಿಗೆ ಐದು ವರ್ಷಗಳ ಸಾಧನೆಯನ್ನು ಪರಿಗಣಿಸಲಾಗುವುದು.

ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗೆ ಪರಿಗಣಿಸಲಾಗುವ ಕ್ರೀಡೆಗಳ ಪಟ್ಟಿ

1. ಖೋ-ಖೋ
2. ಕಬಡ್ಡಿ
3. ಥ್ರೋಬಾಲ್
4. ಆಟ್ಯಾ-ಪಾಟ್ಯಾ
5. ಮಲ್ಲಕಂಬ
6. ಬಾಲ್ ಬ್ಯಾಡ್ಮಿಂಟನ್
7. ಯೋಗ
8. ಗುಂಡು ಎತ್ತುವುದು
9. ದೊಣ್ಣೆ ವರಸೆ
10. ಮಟ್ಟಿ ಕುಸ್ತಿ/ಜಂಗಿ ಕುಸ್ತಿ
11. ಟೆನ್ನಿಕಾಯ್ಟ್.
12. ಕೇರಂ
13. ವಿಶಿಷ್ಟ ಕ್ರೀಡೆಗಳಲ್ಲಿ ಸಾಧನೆ(ಸಾಂಸ್ಕೃತಿಕ ಮತ್ತು ಜಾನಪದ)
    a. ಸಂಗ್ರಾಣಿ ಕಲ್ಲು ಎತ್ತುವುದು
    b. ಎತ್ತಿನಗಾಡಿ
    c. ಕಂಬಳ

ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಲು ನಿಗಧಿ ಪಡಿಸಲಾಗಿರುವ ಅಂಕಗಳನ್ನು ಆಧಾರದಲ್ಲಿ ಪರಿಗಣಿಸಲಾಗುವುದು.

## ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಲು ಪರಿಗಣಿಸಲಾಗುವ ಅಂಕಪಟ್ಟಿ

| SL.NO | Particulars | Participation | Gold | Silver | Bronze |
|---|---|---|---|---|---|
| 1 | World Cup/ Championship | 90 | 100 | 90 | 70 |
| 2 | Asian Games | 80 | 90 | 80 | 60 |
| 3 | Commonwealth Games | 70 | 80 | 70 | 55 |
| 4 | Asian Championship | 60 | 70 | 60 | 50 |
| 5 | Commonwealth Championship | 50 | 60 | 50 | 40 |
| 6 | S.A.F Games | 40 | 55 | 45 | 35 |
| 7 | Others (International) | 35 | 45 | 35 | 30 |
| 8 | National Games | 30 | 40 | 30 | 20 |
| 9 | Sr. National /inter State /inter Zone /Federation | 25 | 30 | 20 | 15 |
| 10 | All India Inter University Games | 15 | 20 | 15 | 10 |
| 11 | Juniors / S.G.F.I. | 10 | 12 | 10 | 8 |
| 12 | South Zone Competitions | 8 | 10 | 8 | 6 |
| 13 | State Level Senior Competitions recognized by state Associations | 5 | 8 | 6 | 5 |
| 14 | State Level Junior/Sub Junior/Mini Competitions Recognized by Education Department and State Associations | 3 | 5 | 4 | 3 |

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ